ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/212/ಸಪ್ರಾನೇಬ/2016-17/ನೇವಿ-1

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:08.11.2017.

# ಅಧಿಕೃತ ಜ್ಞಾಪನ

ವಿಷಯ: ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ವಿವಿಧ ವಿಷಯಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಆಯ್ಕೆ ಆಗಿರುವ ಅಭ್ಯರ್ಥಿಗಳ ನೇಮಕಾತಿ ಬಗ್ಗೆ.

ಉಲ್ಲೇಖ: ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/128/ಡಿಸಿಇ/2017 (11) ಮತ್ತು (12) ದಿನಾಂಕ:24.10.2017.

*****

ಉಲ್ಲೇಖಿತ ಅಧಿಸೂಚನೆಯಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಆಡಳಿತ ವ್ಯಾಪ್ತಿಗೆ ಒಳಪಡುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ವಾಣಿಜ್ಯಶಾಸ್ತ್ರ ಮತ್ತು ಪತ್ರಿಕೋದ್ಯಮ ವಿಷಯಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಆಯ್ಕೆ ಮಾಡಿರುವ ಅಭ್ಯರ್ಥಿಗಳಿಗೆ ಸರ್ಕಾರ ನೇಮಕಾತಿ ಆದೇಶವನ್ನು ಹೊರಡಿಸಲಾಗಿದೆ.

ಉಲ್ಲೇಖಿತ ಸರ್ಕಾರದ ಅಧಿಸೂಚನೆಯಲ್ಲಿ ಸರ್ಕಾರ ನೇಮಕಾತಿ ಆದೇಶ ನೀಡಿರುವ ವಾಣಿಜ್ಯಶಾಸ್ತ್ರ ಮತ್ತು ಪತ್ರಿಕೋದ್ಯಮ ವಿಷಯಗಳ ಒಟ್ಟು-06 ಸಹಾಯಕ ಪ್ರಾಧ್ಯಾಪಕರುಗಳಿಗೆ ಸ್ಥಳನಿಯುಕ್ತಿ ಆದೇಶ ನೀಡಲು ದಿನಾಂಕ:18.11.2017ರಂದು ಸ್ಥಳ ನಿಯುಕ್ತಿ ಕೌನ್ಸಿಲಿಂಗ್ ಏರ್ಪಡಿಸಲಾಗಿದೆ. ಅಭ್ಯರ್ಥಿಗಳು ದಿನಾಂಕ:18.11.2017ರಂದು ಮಧ್ಯಾಹ್ನ 12.00 ಗಂಟೆಗೆ **ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ತಾಂತ್ರಿಕ ಶಿಕ್ಷಣ ಕಟ್ಟಡ, ಅರಮನೆ ರಸ್ತೆ, ಬೆಂಗಳೂರು** ಇಲ್ಲಿ ಸ್ಥಳನಿಯುಕ್ತಿ ಕೌನ್ಸಿಲಿಂಗ್‌ಗೆ ಹಾಜರಾಗುವಂತೆ ಸೂಚಿಸಲಾಗಿದೆ.

ಅಭ್ಯರ್ಥಿಗಳಿಗೆ ಉಲ್ಲೇಖಿತ ಸರ್ಕಾರದ ಅಧಿಸೂಚನೆಯನ್ನು ಪ್ರತ್ಯೇಕವಾಗಿ ನೋಂದಣಿ ಅಂಚೆ ಮೂಲಕ ಕಳುಹಿಸಿಕೊಡುವುದಿಲ್ಲ. ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುವ ಉಲ್ಲೇಖಿತ ಅಧಿಸೂಚನೆಯನ್ನು ಡೌನ್‌ಲೋಡ್ ಮಾಡಿಕೊಳ್ಳುವುದು.

(ಟಿಪ್ಪಣಿ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

Shilpa

ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು

ಇವರಿಗೆ:

1) ಉಲ್ಲೇಖಿತ ಸರ್ಕಾರದ ಅಧಿಸೂಚನೆಯಲ್ಲಿ ಅಭ್ಯರ್ಥಿಗಳಿಗೆ.
2) ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು-ಸುತ್ತೋಲೆ ಹಾಗೂ ಅಧಿಸೂಚನೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಸೂಚಿಸಲಾಗಿದೆ.

ಪ್ರತಿಯನ್ನು ಮಾಹಿತಿಗಾಗಿ:

1) ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
3) ಕಾಲೇಜು ಶಿಕ್ಷಣ ಇಲಾಖೆಯ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ.
4) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರುಗಳಿಗೆ
5) ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿಗಳಿಗೆ.

G:\KEA Appointment 2160\KEA Tippani DCE _ 212 (Note).docx

ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 128 ಡಿಸಿಇ 2017 (11)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು. ದಿನಾಂಕ:24-10-2017

## ಅಧಿಸೂಚನೆ

ಕಾಲೇಜು ಶಿಕ್ಷಣ ಇಲಾಖೆಯ ಆಡಳಿತ ವ್ಯಾಪ್ತಿಗೆ ಒಳಪಡುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ವಿವಿಧ ವಿಷಯಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇರ ನೇಮಕಾತಿಗೆ ಆಯ್ಕೆ ಪ್ರಾಧಿಕಾರವಾದ ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಸರ್ಕಾರಕ್ಕೆ ಸಲ್ಲಿಸಿದ ಅಂತಿಮ ಆಯ್ಕೆ ಪಟ್ಟಿಯನ್ನು ಸರ್ಕಾರ ದಿನಾಂಕ:04-02-2017ರ ಅಧಿಸೂಚನೆ ಸಂಖ್ಯೆ: ಇಡಿ 33 ಡಿಸಿಇ 2017 ರಲ್ಲಿ ಪ್ರಕಟಿಸಿದೆ. ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ನೇಮಕಾತಿ) (ವಿಶೇಷ) ನಿಯಮಗಳು, 2014 ರ ನಿಯಮ 9ರ ಉಪ-ನಿಯಮ (2) ಮತ್ತು (3) ರ ಅನುಸಾರ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳ ಅರ್ಹತೆಯ ದೃಢೀಕರಣಕ್ಕೆ ಸಂಬಂಧಿಸಿದಂತೆ ಅಗತ್ಯ ವಿಚಾರಣೆಗಳು ಪೂರ್ಣಗೊಂಡಿರುವ ಈ ಕೆಳಕಂಡ ಅಭ್ಯರ್ಥಿಗಳನ್ನು ಸರ್ಕಾರವು ವೇತನ ಶ್ರೇಣಿ ರೂ.15600-39100+6000 (ಎಜಿಪಿ) (ಯುಜಿಸಿ ವೇತನ ಶ್ರೇಣಿ) ರಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ನೇಮಿಸಿದೆ.

ವಿಷಯ: ವಾಣಿಜ್ಯಶಾಸ್ತ್ರ

ಸಾಮಾನ್ಯ (ಹೈದ್ರಾಬಾದ್ ಕರ್ನಾಟಕ ವೃಂದ)

| ಕ್ರಮ ಸಂಖ್ಯೆ | ದಿನಾಂಕ:04-02-2017ರ ಆಯ್ಕೆ ಪಟ್ಟಿಯಲ್ಲಿನ ಕ್ರಮ ಸಂಖ್ಯೆ | ಹೆಸರು | ಜನ್ಮ ದಿನಾಂಕ | ಪ್ರವರ್ಗ |
|---|---|---|---|---|
| 1 | 16 | UMAKANT GANAPATI | 01-07-1985 | SC/RL/HK |
| 2 | 18 | MURUGESH T M | 30-07-1986 | 3B/RL/HK |

ವಿಷಯ: ವಾಣಿಜ್ಯಶಾಸ್ತ್ರ

ಸಾಮಾನ್ಯ (ಮಿಕ್ಕುಳಿದ ವೃಂದ)

| ಕ್ರಮ ಸಂಖ್ಯೆ | ದಿನಾಂಕ:04-02-2017ರ ಆಯ್ಕೆ ಪಟ್ಟಿಯಲ್ಲಿನ ಕ್ರಮ ಸಂಖ್ಯೆ | ಹೆಸರು | ಜನ್ಮ ದಿನಾಂಕ | ಪ್ರವರ್ಗ |
|---|---|---|---|---|
| 1 | 285 | AKKI MARUTHI | 25-06-1986 | C1 |
| 2 | 314 | YAMANOOR | 01-06-1988 | 2A |
| 3 | 390 | S V SUMITRA | 25-04-1989 | SC/W |

ಈ ಅಧಿಸೂಚನೆಯ ಪ್ರತಿಯನ್ನು ಮೇಲೆ ನಮೂದಿಸಿರುವ ಅಭ್ಯರ್ಥಿಗಳ ಖಾಯಂ ವಿಳಾಸಕ್ಕೆ ಪ್ರತ್ಯೇಕವಾಗಿ ನೊಂದಣಿ ಅಂಚೆಯ ಮೂಲಕ ರವಾನಿಸಲು ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರು ಕ್ರಮವಹಿಸುವುದು.

ಸದರಿ ಹುದ್ದೆಗೆ ನೇಮಕಗೊಂಡ ಅಭ್ಯರ್ಥಿಗಳು ಈ ಆದೇಶ ತಲುಪಿದ 15 (ಹದಿನೈದು) ದಿನಗಳೊಳಗೆ ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ತಾಂತ್ರಿಕ ಶಿಕ್ಷಣ ಭವನ, 2ನೇ ಮಹಡಿ, ಅರಮನೆ ರಸ್ತೆ, ಬೆಂಗಳೂರು ಇವರಲ್ಲಿ ವರದಿ ಮಾಡಿಕೊಳ್ಳತಕ್ಕದ್ದು. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರು ನಿಯಮಾನುಸಾರ ಜ್ಯೇಷ್ಠತೆಯ ಆಧಾರದ ಮೇಲೆ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ನಡೆಸಿ ಅಭ್ಯರ್ಥಿಗಳಿಗೆ ಸ್ಥಳನಿಯುಕ್ತಿ ಆದೇಶವನ್ನು ನೀಡುವುದು.

2017-18ನೇ ಶೈಕ್ಷಣಿಕ ವರ್ಷವು ಪ್ರಾರಂಭವಾಗಿರುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 2014ರ ವಿಶೇಷ ನೇಮಕಾತಿ ನಿಯಮಗಳ ಅನುಸಾರ ಅಗತ್ಯ ವಿಚಾರಣೆಗಳು ತೃಪ್ತಿಕರವಾಗಿ ಪೂರ್ಣಗೊಂಡ ಮೇಲಿನ ಅಭ್ಯರ್ಥಿಗಳಿಗೆ ನೇಮಕಾತಿ ಮಾಡಿದೆ.

ಸರ್ಕಾರದ ಪೂರ್ವಾನುಮತಿ ಪಡೆಯದೆ ನಿಗಧಿತ ಅವಧಿಯೊಳಗೆ ವರದಿ ಮಾಡಿಕೊಳ್ಳಲು ವಿಫಲರಾಗುವ ಅಭ್ಯರ್ಥಿಯ ನೇಮಕಾತಿ ಆದೇಶವು ತಾನಾಗಿಯೇ ಅನೂರ್ಜಿತವಾಗುತ್ತದೆ.

<u>ಷರತ್ತುಗಳು:</u>

1. ಇದು ಸ್ಪರ್ಧಾತ್ಮಕ ಪರೀಕ್ಷೆಯ ಆಧಾರದ ಮೇಲೆ ಮಾಡಿರುವ ನೇರ ನೇಮಕಾತಿಯಾಗಿರುವುದರಿಂದ ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ನೇಮಕಾತಿ) (ವಿಶೇಷ) ನಿಯಮಗಳು, 2014 ರ ನಿಯಮ 9ರ ಉಪ-ನಿಯಮ (2) ಮತ್ತು (3) ರೊಂದಿಗೆ ಓದಿಕೊಂಡಂತೆ ಕರ್ನಾಟಕ ಸರ್ಕಾರಿ ನೌಕರರ (ಜ್ಯೇಷ್ಠತೆ) ನಿಯಮಗಳು, 1957 ರ ನಿಯಮ 5ರ ಅನುಸಾರ ಈ ನೇಮಕಾತಿಯ ಸಂದರ್ಭದಲ್ಲಿ ದಿನಾಂಕ:04-02-2017 ರ ಅಧಿಸೂಚನೆಯಲ್ಲಿ ಸರ್ಕಾರ ಪ್ರಕಟಿಸಿರುವ ಆಯ್ಕೆ ಪಟ್ಟಿಯಲ್ಲಿನ ಜ್ಯೇಷ್ಠತೆಯು ಅಂತಿಮವಾಗಿರುತ್ತದೆ.
2. ದಿನಾಂಕ:04-02-2017 ರ ಆಯ್ಕೆ ಪಟ್ಟಿಯಲ್ಲಿನ ಇನ್ನುಳಿದ ಅರ್ಹ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಅಗತ್ಯ ವಿಚಾರಣೆಗಳು ತೃಪ್ತಿಕರವಾಗಿ ಪೂರ್ಣಗೊಂಡ ನಂತರ ಪ್ರತ್ಯೇಕ ನೇಮಕಾತಿ ಆದೇಶ ಹೊರಡಿಸಲಾಗುವುದು. ಅಂತಹ ಅಭ್ಯರ್ಥಿಗಳ ಅರ್ಹತೆ / ಜ್ಯೇಷ್ಠತೆಗೆ ಯಾವುದೇ ಬಾಧೆಯಾಗುವುದಿಲ್ಲ. ಯಾವುದೇ ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾದ ದಿನಾಂಕವನ್ನಾಧರಿಸಿ ಜ್ಯೇಷ್ಠತೆಯನ್ನು ಕ್ಲೇಮ್ ಮಾಡುವ ಹಕ್ಕುಳ್ಳವನಾಗಿರುವುದಿಲ್ಲ.
3. ನೇಮಕಗೊಂಡ ಅಭ್ಯರ್ಥಿಗಳು ಸ್ಥಳನಿಯುಕ್ತಿಗೊಳಿಸಿದ ಕಾಲೇಜಿನ ಪ್ರಾಂಶುಪಾಲರ ಸಮಕ್ಷಮದಲ್ಲಿ ಕಾರ್ಯವರದಿ ಮಾಡಿಕೊಳ್ಳುವ ಸಮಯದಲ್ಲಿ ತಮ್ಮ ವಿದ್ಯಾರ್ಹತೆಗೆ ಸಂಬಂಧಪಟ್ಟ ಮೂಲ ದಾಖಲೆಗಳನ್ನು ಹಾಜರುಪಡಿಸತಕ್ಕದ್ದು.
4. ಈ ನೇಮಕಾತಿಯು ಸ್ಥಳನಿಯುಕ್ತಿಗೊಳಿಸಿದ ಹುದ್ದೆಯಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷಗಳ ಪರೀಕ್ಷಾರ್ಥ ಅವಧಿಯನ್ನು ಅಭ್ಯರ್ಥಿಯು ತೃಪ್ತಿಕರವಾಗಿ ಪೂರೈಸುವ ಷರತ್ತಿಗೊಳಪಟ್ಟಿರುತ್ತದೆ.
5. ಅಭ್ಯರ್ಥಿಯು ಪರೀಕ್ಷಾರ್ಥ ಅವಧಿಯಲ್ಲಿ ಅಕೌಂಟ್ಸ್ ಹೈಯರ್ ಹಾಗೂ ಜನರಲ್ ಲಾ ಇಲಾಖಾ ಪರೀಕ್ಷೆಗಳಲ್ಲಿ ಹಾಗೂ ನಿಯಮಾನುಸಾರ ಕಡ್ಡಾಯ ಕನ್ನಡ ಭಾಷಾ ಹಾಗೂ ಇತರೆ ಪರೀಕ್ಷೆಗಳಲ್ಲಿ ಉತ್ತೀರ್ಣರಾಗತಕ್ಕದ್ದು.
6. ನೇಮಕಗೊಂಡ ಅಭ್ಯರ್ಥಿಗಳಿಗಾಗಿ ಕೈಗೊಳ್ಳಲಾಗುವ ಫೌಂಡೇಶನ್ ಕೋರ್ಸ್‌ಗೆ (ಬುನಾದಿ ತರಬೇತಿ) ಹಾಜರಾಗುವುದು ಕಡ್ಡಾಯವಾಗಿರುತ್ತದೆ.
7. ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಅವಶ್ಯಕತೆ ಇರುವ ಓರಿಯಂಟೇಷನ್ ಮತ್ತು ರಿಫ್ರೆಶರ್ ಕೋರ್ಸ್ ತರಬೇತಿಯನ್ನು ಪೂರೈಸತಕ್ಕದ್ದು.
8. ಅಭ್ಯರ್ಥಿಯು ಸ್ಥಳನಿಯುಕ್ತಿಗೊಳಿಸಿದ ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ನಿಯಮಾನುಸಾರದ ವೇತನ, ಭತ್ಯೆ ಇತ್ಯಾದಿ ಪಡೆಯಲು ಅರ್ಹರಿರುತ್ತಾರೆ.

9. ಅಭ್ಯರ್ಥಿಗಳು ಕಾರ್ಯವರದಿ ಮಾಡಿಕೊಳ್ಳಲು ಹಾಗೂ ಸ್ಥಳನಿಯುಕ್ತಿಗೊಳಿಸಿದ ಹುದ್ದೆಯಲ್ಲಿ ಕರ್ತವ್ಯಕ್ಕೆ ಹಾಜರಾಗಲು ಯಾವುದೇ ಪ್ರಯಾಣ ಭತ್ಯೆ ಇತ್ಯಾದಿ ಪಡೆಯಲು ಅರ್ಹರಿರುವುದಿಲ್ಲ.

10. ಮೇಲೆ ನಮೂದಿಸಿರುವ ಅಭ್ಯರ್ಥಿಗಳು ದಿನಾಂಕ:01-04-2006ರ ನಂತರ ಸರ್ಕಾರಿ ಸೇವೆಗೆ ಸೇರಿರುವುದರಿಂದ ಅವರು ನಿಯಮಾನುಸಾರ ಹೊಸ ಪಿಂಚಣಿ ಯೋಜನೆ ವ್ಯಾಪ್ತಿಗೆ ಒಳಪಟ್ಟಿರುತ್ತಾರೆ.

11. ಪರೀಕ್ಷಾರ್ಥ ಅವಧಿಯಲ್ಲಿ ಯಾವುದೇ ವರ್ಗಾವಣೆಗೆ ಅವಕಾಶವಿರುವುದಿಲ್ಲ.

12. ಸದರಿ ನೇಮಕಾತಿ ಅಧಿಸೂಚನೆಯು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಎಲ್ಲಾ ಪೀಠಗಳಲ್ಲಿ ಹಾಗೂ ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯಲ್ಲಿ ದಾಖಲಾಗಿರುವ ರಿಟ್ ಅರ್ಜಿ / ಅರ್ಜಿಗಳಲ್ಲಿ ಮಾನ್ಯ ನ್ಯಾಯಾಲಯಗಳು ನೀಡುವ ಅಂತಿಮ ತೀರ್ಪಿನ ಪಾಲನೆಗೆ ಒಳಪಟ್ಟಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ. ಶಿವಲಿಂಗಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ)

ಇವರಿಗೆ:-

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು (ಇದನ್ನು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 200 ಪ್ರತಿಗಳನ್ನು ಒದಗಿಸುವಂತೆ ಕೋರಿದೆ)

ಗೆ:-

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ) & (ಇ&ಆರ್‌ಎಸ್‌ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಪಾರ್ಕ್ ರಸ್ತೆ, ಬೆಂಗಳೂರು.
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಬೆಂಗಳೂರು-12.
4. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು
5. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು
6. ಮುಖ್ಯ ಆಡಳಿತಾಧಿಕಾರಿಗಳು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು
7. ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು / ಮೈಸೂರು / ಮಂಗಳೂರು / ಧಾರವಾಡ / ಕಲಬುರಗಿ / ಶಿವಮೊಗ್ಗ.
8. ಸಂಬಂಧಪಟ್ಟ ಅಭ್ಯರ್ಥಿಗಳಿಗೆ - ಕಾಲೇಜು ಶಿಕ್ಷಣ ಆಯುಕ್ತರ ಮುಖಾಂತರ
9. ಸಂಬಂಧಪಟ್ಟ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು (ಕಾಲೇಜು ಶಿಕ್ಷಣ ಆಯುಕ್ತರ ಮುಖಾಂತರ)
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು

## ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 128 ಡಿಸಿಇ 2017 (12)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:24-10-2017

## ಅಧಿಸೂಚನೆ

ಕಾಲೇಜು ಶಿಕ್ಷಣ ಇಲಾಖೆಯ ಆಡಳಿತ ವ್ಯಾಪ್ತಿಗೆ ಒಳಪಡುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ವಿವಿಧ ವಿಷಯಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇರ ನೇಮಕಾತಿಗೆ ಆಯ್ಕೆ ಪ್ರಾಧಿಕಾರವಾದ ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಸರ್ಕಾರಕ್ಕೆ ಸಲ್ಲಿಸಿದ ದಿನಾಂಕ:02-01-2017 ರ ಅಂತಿಮ ಆಯ್ಕೆ ಪಟ್ಟಿಯನ್ನು ಸರ್ಕಾರ ದಿನಾಂಕ:04-02-2017ರ ಅಧಿಸೂಚನೆ ಸಂಖ್ಯೆ: ಇಡಿ 33 ಡಿಸಿಇ 2017 ರಲ್ಲಿ ಪ್ರಕಟಿಸಿದೆ. ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ನೇಮಕಾತಿ) (ವಿಶೇಷ) ನಿಯಮಗಳು, 2014 ರ ನಿಯಮ 9ರ ಉಪ-ನಿಯಮ (2) ಮತ್ತು (3) ರ ಅನುಸಾರ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳ ಅರ್ಹತೆಯ ದೃಢೀಕರಣಕ್ಕೆ ಸಂಬಂಧಿಸಿದಂತೆ ಅಗತ್ಯ ವಿಚಾರಣೆಗಳು ಪೂರ್ಣಗೊಂಡಿರುವ ಈ ಕೆಳಕಂಡ ಅಭ್ಯರ್ಥಿಗಳನ್ನು ಸರ್ಕಾರವು ಯು.ಜಿ.ಸಿ. ವೇತನ ಶ್ರೇಣಿ ರೂ.15600-39100+ಎಜಿಪಿ ರೂ.6000 ರಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಈ ಮೂಲಕ ನೇಮಿಸಿದೆ.

**ವಿಷಯ: ಪತ್ರಿಕೋದ್ಯಮ**

**ಸಾಮಾನ್ಯ (ಮಿಕ್ಕುಳಿದ ವೃಂದ)**

| ಕ್ರಮ ಸಂಖ್ಯೆ | ದಿನಾಂಕ: 04-02-2017ರ ಆಯ್ಕೆ ಪಟ್ಟಿಯಲ್ಲಿನ ಕ್ರಮ ಸಂಖ್ಯೆ | ಹೆಸರು | ಜನ್ಮ ದಿನಾಂಕ | ಪ್ರವರ್ಗ |
|---|---|---|---|---|
| 1 | 4 | LAKSHMI R | 11-09-1987 | 2A/W |

ಈ ಅಧಿಸೂಚನೆಯ ಪ್ರತಿಯನ್ನು ಮೇಲೆ ನಮೂದಿಸಿರುವ ಅಭ್ಯರ್ಥಿಗಳ ಖಾಯಂ ವಿಳಾಸಕ್ಕೆ ಪ್ರತ್ಯೇಕವಾಗಿ ನೊಂದಣಿ ಅಂಚೆಯ ಮೂಲಕ ರವಾನಿಸಲು ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರು ಕ್ರಮವಹಿಸುವುದು.

ಸದರಿ ಹುದ್ದೆಗೆ ನೇಮಕಗೊಂಡ ಅಭ್ಯರ್ಥಿಗಳು ಈ ಆದೇಶ ತಲುಪಿದ 15 (ಹದಿನೈದು) ದಿನಗಳೊಳಗೆ ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ತಾಂತ್ರಿಕ ಶಿಕ್ಷಣ ಭವನ, 2ನೇ ಮಹಡಿ, ಅರಮನೆ ರಸ್ತೆ, ಬೆಂಗಳೂರು ಇವರಲ್ಲಿ ವರದಿ ಮಾಡಿಕೊಳ್ಳತಕ್ಕದ್ದು. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರು ನಿಯಮಾನುಸಾರ ಜ್ಯೇಷ್ಠತೆಯ ಆಧಾರದ ಮೇಲೆ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ನಡೆಸಿ ಅಭ್ಯರ್ಥಿಗಳಿಗೆ ಸ್ಥಳನಿಯುಕ್ತಿ ಆದೇಶವನ್ನು ನೀಡುವುದು.

2017-18ನೇ ಶೈಕ್ಷಣಿಕ ವರ್ಷವು ಪ್ರಾರಂಭವಾಗಿರುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 2014ರ ವಿಶೇಷ ನೇಮಕಾತಿ ನಿಯಮಗಳ ಅನುಸಾರ ಅಗತ್ಯ ವಿಚಾರಣೆಗಳು ತೃಪ್ತಿಕರವಾಗಿ ಪೂರ್ಣಗೊಂಡ ಮೇಲಿನ ಅಭ್ಯರ್ಥಿಗಳಿಗೆ ನೇಮಕಾತಿ ಮಾಡಿದೆ.

ಸರ್ಕಾರದ ಪೂರ್ವಾನುಮತಿ ಪಡೆಯದೆ ನಿಗಧಿತ ಅವಧಿಯೊಳಗೆ ವರದಿ ಮಾಡಿಕೊಳ್ಳಲು ವಿಫಲರಾಗುವ ಅಭ್ಯರ್ಥಿಯ ನೇಮಕಾತಿ ಆದೇಶವು ತಾನಾಗಿಯೇ ಅನೂರ್ಜಿತವಾಗುತ್ತದೆ.

ಷರತ್ತುಗಳು:

1. ಇದು ಸ್ಪರ್ಧಾತ್ಮಕ ಪರೀಕ್ಷೆಯ ಆಧಾರದ ಮೇಲೆ ಮಾಡಿರುವ ನೇರ ನೇಮಕಾತಿಯಾಗಿರುವುದರಿಂದ ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ನೇಮಕಾತಿ) (ವಿಶೇಷ) ನಿಯಮಗಳು, 2014 ರ ನಿಯಮ 9ರ ಉಪ-ನಿಯಮ (2) ಮತ್ತು (3) ರೊಂದಿಗೆ ಓದಿಕೊಂಡಂತೆ ಕರ್ನಾಟಕ ಸರ್ಕಾರಿ ನೌಕರರ (ಜ್ಯೇಷ್ಠತೆ) ನಿಯಮಗಳು, 1957 ರ ನಿಯಮ 5ರ ಅನುಸಾರ ಈ ನೇಮಕಾತಿಯ ಸಂದರ್ಭದಲ್ಲಿ ದಿನಾಂಕ:04-02-2017 ರ ಅಧಿಸೂಚನೆಯಲ್ಲಿ ಸರ್ಕಾರ ಪ್ರಕಟಿಸಿರುವ ಆಯ್ಕೆ ಪಟ್ಟಿಯಲ್ಲಿನ ಜ್ಯೇಷ್ಠತೆಯು ಅಂತಿಮವಾಗಿರುತ್ತದೆ.
2. ದಿನಾಂಕ:04-02-2017 ರ ಆಯ್ಕೆ ಪಟ್ಟಿಯಲ್ಲಿನ ಇನ್ನುಳಿದ ಅರ್ಹ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಅಗತ್ಯ ವಿಚಾರಣೆಗಳು ತೃಪ್ತಿಕರವಾಗಿ ಪೂರ್ಣಗೊಂಡ ನಂತರ ಪ್ರತ್ಯೇಕ ನೇಮಕಾತಿ ಆದೇಶ ಹೊರಡಿಸಲಾಗುವುದು. ಅಂತಹ ಅಭ್ಯರ್ಥಿಗಳ ಅರ್ಹತೆ / ಜ್ಯೇಷ್ಠತೆಗೆ ಯಾವುದೇ ಬಾಧೆಯಾಗುವುದಿಲ್ಲ. ಯಾವುದೇ ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾದ ದಿನಾಂಕವನ್ನಾಧರಿಸಿ ಜ್ಯೇಷ್ಠತೆಯನ್ನು ಕ್ಲೇಮ್ ಮಾಡುವ ಹಕ್ಕುಳ್ಳವನಾಗಿರುವುದಿಲ್ಲ.
3. ನೇಮಕಗೊಂಡ ಅಭ್ಯರ್ಥಿಗಳು ಸ್ಥಳನಿಯುಕ್ತಿಗೊಳಿಸಿದ ಕಾಲೇಜಿನ ಪ್ರಾಂಶುಪಾಲರ ಸಮಕ್ಷಮದಲ್ಲಿ ಕಾರ್ಯವರದಿ ಮಾಡಿಕೊಳ್ಳುವ ಸಮಯದಲ್ಲಿ ತಮ್ಮ ವಿದ್ಯಾರ್ಹತೆಗೆ ಸಂಬಂಧಪಟ್ಟ ಮೂಲ ದಾಖಲೆಗಳನ್ನು ಹಾಜರುಪಡಿಸತಕ್ಕದ್ದು.
4. ಈ ನೇಮಕಾತಿಯು ಸ್ಥಳನಿಯುಕ್ತಿಗೊಳಿಸಿದ ಹುದ್ದೆಯಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷಗಳ ಪರೀಕ್ಷಾರ್ಥ ಅವಧಿಯನ್ನು ಅಭ್ಯರ್ಥಿಯು ತೃಪ್ತಿಕರವಾಗಿ ಪೂರೈಸುವ ಷರತ್ತಿಗೊಳಪಟ್ಟಿರುತ್ತದೆ.
5. ಅಭ್ಯರ್ಥಿಯು ಪರೀಕ್ಷಾರ್ಥ ಅವಧಿಯಲ್ಲಿ ಅಕೌಂಟ್ಸ್ ಹೈಯರ್ ಹಾಗೂ ಜನರಲ್ ಲಾ ಇಲಾಖಾ ಪರೀಕ್ಷೆಗಳಲ್ಲಿ ಹಾಗೂ ನಿಯಮಾನುಸಾರ ಕಡ್ಡಾಯ ಕನ್ನಡ ಭಾಷಾ ಹಾಗೂ ಇತರೆ ಪರೀಕ್ಷೆಗಳಲ್ಲಿ ಉತ್ತೀರ್ಣರಾಗತಕ್ಕದ್ದು.
6. ನೇಮಕಗೊಂಡ ಅಭ್ಯರ್ಥಿಗಳಿಗಾಗಿ ಕೈಗೊಳ್ಳಲಾಗುವ ಫೌಂಡೇಶನ್ ಕೋರ್ಸ್‌ಗೆ (ಬುನಾದಿ ತರಬೇತಿ) ಹಾಜರಾಗುವುದು ಕಡ್ಡಾಯವಾಗಿರುತ್ತದೆ.
7. ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಅವಶ್ಯಕತೆ ಇರುವ ಓರಿಯಂಟೇಷನ್ ಮತ್ತು ರೆಫ್ರೆಶರ್ ಕೋರ್ಸ್ ತರಬೇತಿಯನ್ನು ಪೂರೈಸತಕ್ಕದ್ದು.
8. ಅಭ್ಯರ್ಥಿಯು ಸ್ಥಳನಿಯುಕ್ತಿಗೊಳಿಸಿದ ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ನಿಯಮಾನುಸಾರದ ವೇತನ, ಭತ್ಯೆ ಇತ್ಯಾದಿ ಪಡೆಯಲು ಅರ್ಹರಿರುತ್ತಾರೆ.
9. ಅಭ್ಯರ್ಥಿಗಳು ಕಾರ್ಯವರದಿ ಮಾಡಿಕೊಳ್ಳಲು ಹಾಗೂ ಸ್ಥಳನಿಯುಕ್ತಿಗೊಳಿಸಿದ ಹುದ್ದೆಯಲ್ಲಿ ಕರ್ತವ್ಯಕ್ಕೆ ಹಾಜರಾಗಲು ಯಾವುದೇ ಪ್ರಯಾಣ ಭತ್ಯೆ ಇತ್ಯಾದಿ ಪಡೆಯಲು ಅರ್ಹರಿರುವುದಿಲ್ಲ.
10. ಮೇಲೆ ನಮೂದಿಸಿರುವ ಅಭ್ಯಥಿಗಳು ದಿನಾಂಕ:01-04-2006ರ ನಂತರ ಸರ್ಕಾರಿ ಸೇವೆಗೆ ಸೇರಿರುವುದರಿಂದ ಅವರು ನಿಯಮಾನುಸಾರ ಹೊಸ ಪಿಂಚಣಿ ಯೋಜನೆ ವ್ಯಾಪ್ತಿಗೆ ಒಳಪಟ್ಟಿರುತ್ತಾರೆ.
11. ಪರೀಕ್ಷಾರ್ಥ ಅವಧಿಯಲ್ಲಿ ಯಾವುದೇ ವರ್ಗಾವಣೆಗೆ ಅವಕಾಶವಿರುವುದಿಲ್ಲ.